# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 212 | Pages. 2 | Date: 02-07-2025, WEDNESDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 212 - ಪುಟಗಳು : 2 - 02 ಜುಲೈ 2025 ಬುಧವಾರ Ph: 8762954248 ದರ : ₹1


# ಕೊರತೆಗಳ ಮಧ್ಯೆಯೂ ಸಾಧನೆಗೆ ಮೆಚ್ಚುಗೆ

## ಪ್ರತಿಭಾವಂತ ಮಕ್ಕಳು, ಶಿಕ್ಷಕರಿಗೆ ಅಭಿನಂದನೆ | ಫಲಿತಾಂಶ ಚೇತರಿಕೆಗೆ ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಾಡಾನೆಗಳ ಹಾವಳಿ, ವಿಪರೀತ ಮಳೆ, ಶಿಕ್ಷಕರ ಕೊರತೆ ಹೀಗೆ ನಾನಾ ಸಮಸ್ಯೆಗಳಿದ್ದರೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಾಲ್ಲೂಕು ಜಿಲ್ಲೆಗೆ ಪ್ರಥಮ ಹಾಗೂ ರಾಜ್ಯಕ್ಕೆ 5ನೇ ಸ್ಥಾನ ಪಡೆದಿರುವುದು ಹೆಮ್ಮೆಯ ವಿಚಾರ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.



ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 600ಕ್ಕೂ ಹೆಚ್ಚು ಅಂಕ ಗಳಿಸಿದ ತಾಲ್ಲೂಕಿನ ಎಲ್ಲಾ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಮಂಗಳವಾರ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಹಾಗೂ ಶಿಕ್ಷಕರಿಗೆ ಸನ್ಮಾನ ಸಮಾರಂಭದಲ್ಲಿ ಮಾತನಾಡಿ, ಉತ್ತಮ ಶಿಕ್ಷಣ ಮತ್ತು ಸಂಸ್ಕಾರ ಪಡೆದು ವಿದ್ಯಾರ್ಥಿಗಳು ದೇಶಕ್ಕೆ ಆಸ್ತಿಯಾಗಬೇಕೆಂದರು.

ಶಿಕ್ಷಕರ ಶ್ರಮ, ಪಾಂಡಿತ್ಯದಿಂದ ಮಕ್ಕಳು ಒಳ್ಳೆಯ ಅಂಕ ಗಳಿಸಿದ್ದಾರೆ. ಹೀಗಾಗಿ ಮಕ್ಕಳು ಹಾಗೂ ಶಿಕ್ಷಕರನ್ನು ಅಭಿನಂದಿಸಲಾಗುತ್ತಿದೆ. ಮಕ್ಕಳ ಉತ್ತಮ ಭವಿಷ್ಯಕ್ಕೆ ಶಿಕ್ಷಕರು ಕಾರಣರಾಗಿದ್ದು, ದೇಶದ ಅಭಿವೃದ್ಧಿ ಎಷ್ಟು ಮಕ್ಕಳು ಶಿಕ್ಷಣ ಪಡೆಯುತ್ತಾರೆಂಬುದರ ಮೇಲೆ ನಿಂತಿದೆ. ಎಲ್ಲಿ ಉತ್ತಮ ಶಿಕ್ಷಣ, ಸಂಸ್ಕಾರ ಸಿಗುತ್ತದೆಯೋ ಅಂತಹ ಕಡೆ ಮಕ್ಕಳು ದೇಶದ ಆಸ್ತಿಯಾಗುತ್ತಾರೆ ಎಂದು ಹೇಳಿದರು.

ಮಲೆನಾಡು ಭಾಗದಲ್ಲಿ ಸರ್ಕಾರಿ ಶಾಲೆಗಳ ಪರಿಸ್ಥಿತಿ ಹೇಗಿದೆ ಎಂಬುದು ಎಲ್ಲರಿಗೂ ಗೊತ್ತು. ಕಾಡಾನೆಗಳ ಉಪಟಳ, ನಿರಂತರ ಮಳೆ, ಶಿಕ್ಷಕರ ಕೊರತೆ ನಡುವೆ ಫಲಿತಾಂಶದಲ್ಲಿ ಗುರುತರ ಸಾಧನೆ ಮಾಡಲಾಗಿದೆ.

ಎಲ್ಲಾ ಸವಾಲುಗಳನ್ನು ಮೆಟ್ಟಿ ಮುಂದಿನ ವರ್ಷಗಳಲ್ಲಿ ಇನ್ನಷ್ಟು ಸಾಧನೆ ಮಾಡಬೇಕೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪಾ ಮಾತನಾಡಿ, ಸಕಲೇಶಪುರ ವಿಭಿನ್ನ ತಾಲ್ಲೂಕು. ಭೌಗೋಳಿಕವಾಗಿ ದೊಡ್ಡ ಕ್ಷೇತ್ರವಾದರೂ ಶಿಕ್ಷಕರ ಕೊರತೆ ಹೆಚ್ಚಿದೆ. ಅತಿಥಿ ಶಿಕ್ಷಕರ ನೆರವಿನಿಂದ ಉತ್ತಮ ಪಾಠ ಪ್ರವಚನ ಮಾಡಲಾಗುತ್ತಿದೆ. ಕಷ್ಟಕರ ಪರಿಸ್ಥಿತಿಯಲ್ಲಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಹಲವು ಶಾಲೆಗಳಲ್ಲಿ ಖಾಯಂ ಶಿಕ್ಷಕರಿಲ್ಲ. ಅತಿಥಿ ಶಿಕ್ಷಕರ ಕೊರತೆ ಕಾಡುತ್ತಿದೆ. ಹಲವು ವಿಷಯಗಳಿಗೆ ಸಿಗುತ್ತಿಲ್ಲ ಎಂದು ಅಳಲು ತೋಡಿಕೊಂಡರು.

8 ಸರ್ಕಾರಿ ಶಾಲೆಗಳು ಶೇ.100 ಫಲಿತಾಂಶ ಪಡೆದಿವೆ. ಒಟ್ಟು ಫಲಿತಾಂಶ ಶೇ. 93.5 ಆಗಿದೆ. ಜಿಲ್ಲೆಯ ಶೇಕಡಾವಾರು ಫಲಿತಾಂಶಕ್ಕಿತ ಶೇ.11 ಅಧಿಕವಾಗಿದೆ. ಹೀಗಾಗಿ ಜಿಲ್ಲೆ ರಾಜ್ಯಕ್ಕೆ 6ನೇ ಸ್ಥಾನ ಪಡೆಯಲು ಸಕಲೇಶಪುರದ ಪಾತ್ರ ದೊಡ್ಡದಾಗಿದೆ.

ಕೂಲಿ ಕಾರ್ಮಿಕ ಮಕ್ಕಳೇ ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಶಾಲೆಗಳಲ್ಲಿ ಓದುತ್ತಿದ್ದಾರೆ. 600ಕ್ಕೂ ಹೆಚ್ಚು ಅಂಕಗಳನ್ನು ತಾಲ್ಲೂಕಿನ 36 ವಿದ್ಯಾರ್ಥಿಗಳು ಪಡೆದಿದ್ದಾರೆ ಎಂದು ಮಾಹಿತಿ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪಾ ಹಾಗೂ ಶಿಕ್ಷಕರು, ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು. ಬಿಜೆಪಿ ಮುಖಂಡರಾದ ಬಾಳ್ಳು ಮಲ್ಲಿಕಾರ್ಜುನ್, ಬ್ಯಾಕರವಳ್ಳಿ ಜಯಣ್ಣ, ಪ್ರತಾಪ್, ಅಶ್ವಥ್, ರಾಮಚಂದ್ರೇಗೌಡ, ಪುರಸಭಾ ಸದಸ್ಯೆ ವನಜಾಕ್ಷಿ, ಡಾ. ಸುಧಾಕರ್, ಶಿಕ್ಷಕರ ಸಂಘದ ಪದಾಧಿಕಾರಿಗಳಾದ ಆನಂದ್, ಜಗದೀಶ್, ರೇಣುಕಾರಾಧ್ಯ, ಮಲ್ನಾಡ್ ಜಾಕೀರ್ ಹಾಗೂ ಇತರರಿದ್ದರು.

# ಮೂಲಸೌಲಭ್ಯದಿಂದ ದೂರ ಉಳಿದ ದಲಿತ ಕುಟುಂಬಗಳು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲ್ಲೂಕಿನ ಕೆಸ್ತೂರು ಗ್ರಾಮದ 10 ದಲಿತ ಕುಟುಂಬಗಳು ಮೂಲ ಸೌಕರ್ಯದಿಂದ ದೂರ ಉಳಿದಿದ್ದು ಜನಪ್ರತಿನಿಧಿ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಬೇಸತ್ತು ಹೋಗಿದ್ದಾರೆ.



ಜಲ ಜೀವನ್ ಮಿಷನ್ ಮೂಲಕ ಮನೆ ಮನೆಗೆ ಗಂಗೆ, ಗೃಹಜ್ಯೋತಿ ಯೋಜನೆಯಿಂದ ಉಚಿತ ವಿದ್ಯುತ್, ವಿವಿಧ ವಸತಿ ಯೋಜನೆಯಡಿ ಎಲ್ಲರಿಗೂ ಸೂರು ಎಂಬ ವರ್ಣರಂಜಿತ ಯೋಜನೆಗಳು ಇಲ್ಲಿನ ಕುಟುಂಬಗಳಿಗೆ ತಲುಪದೆ ಇರುವುದು ಆಡಳಿತ ವ್ಯವಸ್ಥೆಗೆ ಹಿಡಿದ ಕೈಗನ್ನಡಿಯಾಗಿದೆ.

ಹಂಡ್ರಂಗಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕೆಸ್ತೂರು ಗ್ರಾಮದ ದಲಿತ ಕುಟುಂಬಗಳು ದಶಕಗಳಿಂದ ಯಾವ ಸೌಲಭ್ಯವಿಲ್ಲದೆ ಬದುಕುತ್ತಿವೆ. ಕೂಲಿ ಕೆಲಸವನ್ನೇ ನಂಬಿರುವ ಕುಟುಂಬಸ್ಥರು ಅನಕ್ಷರಸ್ಥರು. ಹೀಗಾಗಿ ಸರ್ಕಾರಿ ಸೌಲಭ್ಯ ಪಡೆಯುವ ಗೋಜಿಗೆ ಹೋಗಿಲ್ಲ. ಹೊಟ್ಟೆಪಾಡಿಗಾಗಿ ದುಡಿಯುವುದು ಅನಿವಾರ್ಯವಾದ್ದರಿಂದ ಸರ್ಕಾರಿ ಕಚೇರಿ ಮೆಟ್ಟಿಲು ಹತ್ತಲು ಸಾಧ್ಯವಾಗಿಲ್ಲ. ಗ್ರಾಮದ 10 ದಲಿತ ಕುಟುಂಬಗಳು ಗ್ರಾಮ ಹೊರವಲಯದಲ್ಲಿ ವಾಸ ಮಾಡುತ್ತಿವೆ. ಸರಿಯಾದ ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ ಇನ್ನು ತಲುಪಿಲ್ಲ. ದಶಕಗಳ ಹಿಂದೆ ಗೋಮಾಳದಲ್ಲಿ ತಾತ್ಕಾಲಿಕ ಶೆಡ್ ನಿರ್ಮಿಸಿಕೊಂಡಿರುವ ಅವರು ಈಗಲೂ ಅಲ್ಲಿಯೇ ವಾಸವಿದ್ದಾರೆ. ಸಮಸ್ಯೆಗೆ ಪರಿಹಾರ ಕಲ್ಪಿಸಬೇಕಿದ್ದ ಗ್ರಾಮ ಪಂಚಾಯಿತಿ ಅಧಿಕಾರಿಗಳು ಕಣ್ಣಿದ್ದು ಕುರುಡರಂತೆ ವರ್ತಿಸುತ್ತಿದ್ದಾರೆ.

ನಿವಾಸಿ ಚಂದ್ರಿಕಾ ಮಾತನಾಡಿ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯೂ ಇಲ್ಲದಿರುವುದರಿಂದ ಅನಿವಾರ್ಯವಾಗಿ ಕಲುಷಿತ ನೀರನ್ನೇ ಸೇವಿಸುವಂತಾಗಿದೆ. ಶೆಡ್‌ಗಳಿಗೆ ಸಂಪರ್ಕಿಸುವ ರಸ್ತೆಯೂ ಸರಿಯಾಗಿಲ್ಲ.

ಸ್ವಲ್ಪ ಮಳೆಯಾದರೂ ಕೆಸರುಗದ್ದೆಯಾಗುವ ರಸ್ತೆಯಲ್ಲೇ ಮಕ್ಕಳು, ಮಹಿಳೆಯರು ನಡೆದಾಡಬೇಕು. ವಿದ್ಯುತ್ ಸಂಪರ್ಕವಿಲ್ಲದಿರುವುದರಿಂದ ಕತ್ತಲೆಯಲ್ಲೇ ಕಾಲ ಕಳೆಯಬೇಕಿದೆ. ಹೀಗಾಗಿ ಮಕ್ಕಳ ವಿದ್ಯಾಭ್ಯಾಸಕ್ಕೂ ತೊಂದರೆಯಾಗಿದೆ ಎಂದರು.

# ಹೃದಯಾಘಾತಕ್ಕೆ ಮತ್ತೆ ಮೂವರ ಬಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಲೇ ಇದ್ದು ಮತ್ತೆ ಮೂವರು ಪ್ರಾಣ ಬಿಟ್ಟಿದ್ದಾರೆ. 40ಕ್ಕಿಂತ ಕಡಿಮೆ ವಯಸ್ಸಿನವರೇ ಮೃತಪಟ್ಟಿರುವುದರಿಂದ ಆತಂಕ ಹೆಚ್ಚಿದೆ.



ಬೇಲೂರು ತಾಲ್ಲೂಕು ಯಗಶೆಟ್ಟಿಹಳ್ಳಿ ಗ್ರಾಮದ ರವಿಕುಮಾರ್ (30), ಹೊಳೆನರಸೀಪುರ ತಾಲ್ಲೂಕಿನ ಸೋಮನಹಳ್ಳಿ ಕೊಪ್ಪಲು ಗ್ರಾಮದ ಸಂಜಯ್ (27) ಹಾಗು ಕೊಮ್ಮೆನಹಳ್ಳಿಯ ಹರ್ಷಿತಾ (22) ಮೃತರು.

**ಪಾರ್ಟಿಗೆ ತೆರಳಿದ್ದ ಸಂಜಯ್**

ಹೊಳೆನರಸೀಪುರ ತಾಲ್ಲೂಕು ಸೋಮನಹಳ್ಳಿ ಕೊಪ್ಪಲು ಗ್ರಾಮದ ಸಂಜಯ್ ಸೋಮವಾರ ರಾತ್ರಿ ಸ್ನೇಹಿತರೊಂದಿಗೆ ಪಾರ್ಟಿ ಮುಗಿಸಿ ಬಂದ ನಂತರ ರಕ್ತದೊತ್ತಡ ಹೆಚ್ಚಾಗಿದ್ದು, ಎದೆ ನೋವು ಕಾಣಿಸಿಕೊಂಡಿತ್ತು. ಅವರನ್ನು ಸೋಮನಹಳ್ಳಿ ಪ್ರಾಥಮಿಕ ಆಸ್ಪತ್ರೆಗೆ ಕರೆದುಕೊಂಡು ಹೋಗಲಾಗಿತ್ತು. ಹೆಚ್ಚಿನ ಚಿಕಿತ್ಸೆಗಾಗಿ ಬೇರೊಂದು ಆಸ್ಪತ್ರೆಗೆ ಕರೆದೊಯ್ಯುವಾಗ ಮಾರ್ಗ ಮಧ್ಯದಲ್ಲಿ ಮೃತಪಟ್ಟಿದ್ದಾರೆ. ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿರುವ ಸಂಬಂಧಿಕರು, ಹಳ್ಳಿ ಮೈಸೂರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ಒಂದೂವರೆ ತಿಂಗಳ ಬಾಣಂತಿಯಾಗಿದ್ದ ಹರ್ಷಿತಾ, ತವರೂರಾದ ಶಿವಮೊಗ್ಗ ಜಿಲ್ಲೆಯ ಆಯನೂರಿಗೆ ತೆರಳಿದ್ದರು. ಅಲ್ಲಿ ಹೃದಯಾಘಾತ ಆಗಿದ್ದು, ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ. ಪತಿಯ ಊರಾದ ಕೊಮ್ಮೆನಹಳ್ಳಿಯಲ್ಲಿ ಅಂತ್ಯಕ್ರಿಯೆ ನಡೆಯಿತು. ಒಂಬತ್ತು ತಿಂಗಳ ತನ್ನ ಮಗನ ಜೊತೆ ಆಟವಾಡುತ್ತಿದ್ದಾಗಲೇ ರವಿಕುಮಾರ್ ಮೃತಪಟ್ಟಿದ್ದಾರೆ. ಹಗರೆ ಸಮೀಪದ ಮಾದೀಹಳ್ಳಿ ಗ್ರಾಮದ ಅವರು ತನ್ನ ಪತ್ನಿ ಹಾಗೂ ಮಗುವನ್ನು ನೋಡಲೆಂದು ಹೆಂಡತಿ ತವರೂರು ಯಗಶೆಟ್ಟಿಹಳ್ಳಿಗೆ ಸೋಮವಾರ ತೆರಳಿದ್ದರು. ಸೋಮವಾರ ಸಂಜೆ ಪತ್ನಿಯನ್ನು ಮಾತನಾಡಿಸಿ ಮಗು ಜೊತೆ ಆಟವಾಡುತ್ತಿದ್ದಾಗಲೇ ಎದೆನೋವಿನಿಂದ ಕುಸಿದು ಬಿದ್ದಿದ್ದಾರೆ. ಆಸ್ಪತ್ರೆಗೆ ಕರೆದೊಯ್ಯಬೇಕು ಎನ್ನುವಷ್ಟರಲ್ಲಿ ಉಸಿರು ನಿಲ್ಲಿಸಿದ್ದಾರೆ. ಕೃಷಿಕರಾಗಿದ್ದ ರವಿಕುಮಾರ್ ಎರಡು ವರ್ಷಗಳ ಹಿಂದೆ ವಿವಾಹವಾಗಿದ್ದರು. ಮಾದೀಹಳ್ಳಿಯಲ್ಲಿ ಮಂಗಳವಾರ ಅಂತ್ಯಕ್ರಿಯೆ ನೆರವೇರಿತು.

# ಅಧಿಕಾರಿಗಳಿಂದ ಜಾವಗಲ್ ಹೋಬಳಿ ನಿರ್ಲಕ್ಷ್ಯ: ಆಕ್ರೋಶ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸಬೇಕಿದ್ದ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದು ಬೇಲೂರು ವಿಧಾನಸಭಾ ಕ್ಷೇತ್ರದ ಜಾವಗಲ್ ಹೋಬಳಿಯನ್ನು ಕಡೆಗಣಿಸುತ್ತಿದ್ದಾರೆ ಎಂದು ಶಾಸಕ ಹೆಚ್.ಕೆ. ಸುರೇಶ್ ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನಾ ಸಭೆಗೆ ತಾಪಂ ಇಒ ಸತೀಶ್ ಗೈರಾದ ಹಿನ್ನೆಲೆಯಲ್ಲಿ ಸಭೆ ನಡೆಸಲು ಆಗಲಿಲ್ಲ. ಆದ್ದರಿಂದ ಅವರು ಅಧಿಕಾರಿಗಳ ವಿರುದ್ಧ ತೀಕ್ಷ್ಣವಾಗ್ದಾಳಿ ನಡೆಸಿದರು. ಸಭೆಗೆ ತಾವರೆಹಳ್ಳಿ, ಕಲ್ಯಾಡಿ, ಜಾವಗಲ್, ಕರಗುಂದ, ಗೊಲ್ಲರಹಳ್ಳಿ, ಕೋಳಗುಂದ, ಅರಕೆರೆ ಸುತ್ತಲಿನ ಹಳ್ಳಿಗಳ ಜನರು ಸಭೆಗೆ ಆಗಮಿಸಿದ್ದರು.

**ಅಮಾನತಿಗೆ ಆಗ್ರಹ:**

ಚುನಾಯಿತ ಪ್ರತಿನಿಧಿಗಳಿಗೆ ಗೌರವ ಕೊಡಬೇಕೆಂಬ ಪರಿಜ್ಞಾನವಿಲ್ಲದ ಅಧಿಕಾರಿ ಸತೀಶ್ ಅವರನ್ನು ತಕ್ಷಣ ಸೇವೆಯಿಂದ ಅಮಾನತು ಮಾಡಿ ಶಾಸಕಾಂಗದ ಗೌರವ ಕಾಪಾಡಬೇಕೆಂದು ಆಗ್ರಹಿಸಿದರು.

ಇಲ್ಲಿ ಹೇಳುವವರು ಕೇಳುವವರು ಯಾರೂ ಇಲ್ಲವಾಗಿದ್ದಾರೆ. ಇದೇ ನಿರ್ಲಕ್ಷ್ಯ ಮುಂದುವರೆದರೆ ತಾ.ಪಂ. ಕಚೇರಿಗೆ ಬೀಗ ಹಾಕುವುದು ಅನಿವಾರ್ಯವಾಗುತ್ತದೆ. ಶಾಸಕರೇ ಗಂಟೆಗಟ್ಟಲೇ ಕಾಯುವ ಸನ್ನಿವೇಶ ನಿರ್ಮಾಣಗೊಂಡಿರುವುದರಿಂದ ಸಾರ್ವಜನಿಕರ ಸ್ಥಿತಿಯ ಬಗ್ಗೆ ಯೋಚಿಸಿದರೆ ಮರುಕ ಹುಟ್ಟುತ್ತದೆಂದರು.

ಬೇಲೂರು ವಿಧಾನಸಭಾ ಕ್ಷೇತ್ರಕ್ಕೆ ಸೇರಿರುವ ಜಾವಗಲ್ ಹೋಬಳಿ ಬಗೆಗೆ ಅಧಿಕಾರಿಗಳಿಂದ ಮಲತಾಯಿ ಧೋರಣೆ ಮುಂದುವರೆದಿದೆ. ಜನರ ಭಾವನೆಗಳ ಜೊತೆ ಚೆಲ್ಲಾಟವಾಡುತ್ತಿರುವ ಅಧಿಕಾರಿಗೆ ತಕ್ಕಪಾಠ ಕಲಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದರು. ಅಧಿಕಾರಿ ವಿರುದ್ಧ ಜನರ ಆಕ್ರೋಶ ಸ್ಫೋಟಗೊಳ್ಳುತ್ತಿದ್ದಂತೆ ಶಾಸಕರು ಎಲ್ಲರನ್ನೂ ಸಮಾಧಾನಪಡಿಸಿದರು.

ಕ್ಷೇತ್ರದ ಜನರ ಕುಂದು ಕೊರತೆ ಆಲಿಸುವ ಉದ್ದೇಶದಿಂದ ಜು. 1ರ ಬೆಳಿಗ್ಗೆ 11 ಗಂಟೆಗೆ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸಭೆ ಕರೆಯುವಂತೆ ಜೂ. 26 ರಂದು ಪತ್ರ ಬರೆಯಲಾಗಿತ್ತು ಎಂದರು.

# ಹೊರಗುತ್ತಿಗೆ ನೌಕರರಿಗೆ ಕೆಲಸ ಕೈ ತಪ್ಪುವ ಭೀತಿ



ಹಾಸನ: ಆರೋಗ್ಯ ಇಲಾಖೆಗೆ ಕಾಯಂ ಸಿಬ್ಬಂದಿ ನೇಮಕ ಪ್ರಕ್ರಿಯೆ ನಡೆಯುತ್ತಿದ್ದು ಅದರಿಂದ ಹೊರಗುತ್ತಿಗೆ ನೌಕರರಿಗೆ ಕೆಲಸ ಕೈತಪ್ಪುವ ಆತಂಕ ಕಾಡುತ್ತಿದೆ. ಸರ್ಕಾರ ಈ ಸಮಸ್ಯೆಗೆ ಪರಿಹಾರ ಕಲ್ಪಿಸಬೇಕು ಎಂದು ಆರೋಗ್ಯ ಇಲಾಖೆ ವಿವಿಧ ವೃಂದದ ಹೊರಗುತ್ತಿಗೆ ನೌಕರರ ಸಂಘದ ರಾಜ್ಯಾಧ್ಯಕ್ಷ ಅಕ್ಷಯ್‌ಗೌಡ ಆಗ್ರಹಿಸಿದರು.

ಸುದ್ದಿಗೋಷ್ಟಿಯಲ್ಲಿ ಮಂಗಳವಾರ ಮಾತನಾಡಿ, ಆರೋಗ್ಯ, ಆಯುಷ್ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಹೊರಗುತ್ತಿಗೆ ನೌಕರರಾಗಿ ಕೆಲಸ ನಿರ್ವಹಿಸುತ್ತಿರುವ ಎಲ್ಲರೂ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೆಲ ಖಾಸಗಿ ಸಂಸ್ಥೆಗಳು ಕಾಯಂ ಹುದ್ದೆಯಿಂದ ತೆರವಾದ ಹುದ್ದೆಗೆ, ಹಣ ಪಡೆದು ಹೊಸ ನೌಕರರ ನೇಮಕ ಮಾಡಿಕೊಳ್ಳುತ್ತಿದ್ದಾರೆ ಎಂದು ದೂರಿದರು. ಹೊರಗುತ್ತಿಗೆ ನೌಕರರಿಗೆ ವೇತನ ಹಾಗು ಇನ್ನಿತರ ಸೌಲಭ್ಯ ಕಲ್ಪಿಸಲು ಕಾರ್ಮಿಕ ಸಚಿವರು ಸಹಕಾರ ಸಂಘ ಸ್ಥಾಪನೆ ಮಾಡುವುದಾಗಿ ಆದೇಶಿಸಿದ್ದಾರೆ. ಈಗಾಗಲೇ ರಾಜ್ಯದ ಮೂರು ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಆರಂಭವಾಗಿದೆ. ಹೊರಗುತ್ತಿಗೆ ನೌಕರರ ಪರವಾಗಿ ದಿಟ್ಟ ಹೆಜ್ಜೆ ಇಟ್ಟಂತಹ ಕಾರ್ಮಿಕ ಸಚಿವರಿಗೆ ರಾಜ್ಯ ಮಟ್ಟದ ಆರೋಗ್ಯ ಇಲಾಖೆಯ ವಿವಿಧ ವೃಂದದ ಹೊರಗುತ್ತಿಗೆ ನೌಕರರ ಸಂಘದ ವತಿಯಿಂದ ಅಭಿನಂದನಾ ಸಮಾರಂಭವನ್ನು ಆಗಸ್ಟ್ ಅಥವಾ ಸೆಪ್ಟೆಂಬರ್ ತಿಂಗಳಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಗಂಗಾಧರ್, ರಾಜಣ್ಣ, ಪುನೀತ್, ವಿರೇಶ್ ಹಾಜರಿದ್ದರು.

# ಸರ್ಕಾರಿ ಜಾಗ ಸಂರಕ್ಷಣೆಗೆ ಡಿಸಿ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ಕಾರದ ಜಾಗಗಳ ಸಂರಕ್ಷಣೆಗೆ ಮುತುವರ್ಜಿ ವಹಿಸುವಂತೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಕಂದಾಯ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿ, ಸಾರ್ವಜನಿಕರ



ಅನುಕೂಲಕ್ಕಾಗಿ ಪೌತಿ ಖಾತೆ ಆಂದೋಲನ ನಡೆಸಬೇಕು. ಕಂದಾಯ ಇಲಾಖೆಯ ವಿವಿಧ ಸ್ತರಗಳಲ್ಲಿ ಮೊದಲ ಸ್ಥಾನವನ್ನು ನಿರಂತರವಾಗಿ ಕಾಯ್ದುಕೊಳ್ಳುತ್ತಿರುವುದಕ್ಕೆ ಪ್ರಶಂಸೆ ವ್ಯಕ್ತಪಡಿಸಿದ ಅವರು, ಇದೇ ರೀತಿ ಮುಂದಿನ ದಿನಗಳಲ್ಲೂ ನಿಗದಿತ ಅವಧಿಯೊಳಗೆ ಅಚ್ಚುಕಟ್ಟಾಗಿ ಕೆಲಸ ನಿರ್ವಹಿಸುವ ಮೂಲಕ ಈ ಸ್ಥಾನವನ್ನು ಕಾಯ್ದುಕೊಳ್ಳುವಂತೆ ತಿಳಿಸಿದರು.

ನಗರದಲ್ಲಿ ಸ್ವಚ್ಛತೆ ಕಾಪಾಡುವುದರ ಜೊತೆಗೆ ಪ್ಲಾಸ್ಟಿಕ್ ಬಳಕೆಯನ್ನು ನಿಯಂತ್ರಿಸಲು ನಿಗಾ ವಹಿಸಬೇಕು. ಕುಡಿಯುವ ನೀರಿನ ಸಮಸ್ಯೆ ಎಲ್ಲಿಯೂ ಕಂಡುಬರದಂತೆ ಎಚ್ಚರ ವಹಿಸಿ ಎಂದ ಅವರು, ಜಿಲ್ಲೆಯ ಜನತೆಯ ಸುರಕ್ಷತೆಗೆ ಆದ್ಯತೆ ನೀಡುವಂತೆ ತಿಳಿಸಿದರು.

ಪ್ರತಿನಿತ್ಯ ದಿನಪತ್ರಿಕೆಗಳಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಕುರಿತು ಪ್ರಕಟವಾಗುವ ಸುದ್ದಿಗಳಿಗೆ ಮನ್ನಣೆ ನೀಡಿ ಸಮಸ್ಯೆ ಪರಿಹಾರಕ್ಕೆ ತಕ್ಷಣ ಗಮನಹರಿಸಿ ಎಂದುಅಧಿಕಾರಿಗೆ ಸೂಚಿಸಿದರು.

ಉಪ ವಿಭಾಗಾಧಿಕಾರಿಗಳಾದ ಶೃತಿ, ಮಾರುತಿ ಹಾಗೂ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಧರ್ಮ ದರ್ಶನಕ್ಕಷ್ಟೇ ಅವಕಾಶ ನೀಡಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನಾಂಬ ಜಾತ್ರಾ ಮಹೋತ್ಸವದಲ್ಲಿ ವಿಐಪಿ ದರ್ಶನ ಸ್ಥಗಿತಗೊಳಿಸಿ ಧರ್ಮ ದರ್ಶನಕ್ಕೆ ಮಾತ್ರ ಅವಕಾಶ ಕಲ್ಪಿಸಬೇಕು ಎಂದು ಹಾಸನಾಂಬ ಜಾತ್ರಾ ಹಿತರಕ್ಷಣಾ ಸಮಿತಿಯಿಂದ ಮಂಗಳವಾರ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿಗೆ ಮನವಿ ಸಲ್ಲಿಸಲಾಯಿತು.

ಸಮಿತಿ ಅಧ್ಯಕ್ಷ ಡಾ. ಎನ್. ರಮೇಶ್ ಮಾತನಾಡಿ, ವ್ಯಾಪಕ ಪ್ರಚಾರದಿಂದ ದೇವಿ ದರ್ಶನಕ್ಕೆ ಬರುತ್ತಿರುವ ಸಂಖ್ಯೆಯಲ್ಲಿ ವಿಪರೀತ ಏರಿಕೆಯಾಗುತ್ತಿದೆ. ಮೊದಲೆಲ್ಲ ಸಾಮಾನ್ಯರಿಗೂ ಗರ್ಭಗುಡಿ ಪ್ರವೇಶವಿರುತ್ತಿತ್ತು. ಈಗ ಗಣ್ಯರಿಗೆ ಮಾತ್ರ ಆ ಅವಕಾಶ ಸಿಗುತ್ತಿದೆ. ಗರ್ಭಗುಡಿ ಮುಂದೆ ನಿಲ್ಲುವ ಪೊಲೀಸ್ ಹಾಗು ಕಂದಾಯ ಇಲಾಖೆ ಸಿಬ್ಬಂದಿ ಭಕ್ತರನ್ನು ತಳ್ಳುವುದರಿಂದ ಹಾಸನಾಂಬ ದೇವಿ ದರ್ಶನವಾಗುವುದಿಲ್ಲ ಎಂದರು.

ಶ್ರೀ ಸಿದ್ದೇಶ್ವರ ದೇವಾಲಯದ ನವರಂಗ ಪ್ರವೇಶ ನಿಷೇಧಿಸಿ ಬಾಗಿಲಿನಲ್ಲೇ ದೇವರ ದರ್ಶನ ಮಾಡಿಸುತ್ತಾರೆ. ವಿಶೇಷ ವ್ಯಕ್ತಿಗಳು ಹಾಗೂ ಹಿಂಬಾಲಕರಿಗೆ ಮಾತ್ರ ಹಾಸನಾಂಬ ದೇವಿ ಎಂಬಂತಹ ಪರಿಸ್ಥಿತಿ ಇತ್ತೀಚಿನ ವರ್ಷಗಳಲ್ಲಿ ನಿರ್ಮಾಣವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದೇವಿ ದರ್ಶನಕ್ಕೆ ರಾಜ್ಯ ಹಾಗೂ ಹೊರ ರಾಜ್ಯಗಳಿಂದ ವಿಶೇಷ ವ್ಯಕ್ತಿಗಳು ಬರುತ್ತಾರೆ. ಶಿಷ್ಟಾಚಾರದ ಹೆಸರಿನಲ್ಲಿ ಅವರಿಗೆ ಆದ್ಯತೆ ನೀಡುವುದರಿಂದ ಸರದಿ ಸಾಲಿನಲ್ಲಿ ನಿಲ್ಲುವ ಭಕ್ತರಿಗೆ ಭಾರೀ ತೊಂದರೆಯಾಗುತ್ತದೆ. ಕಳೆದ ವರ್ಷ ಹೀಗಾಗಿ ನೂಕುನುಗ್ಗಲು ಉಂಟಾಗಿ ತೊಂದರೆಯಾಗಿತ್ತು. ವಿಶೇಷ ದರ್ಶನಕ್ಕೆ ಎರಡು ದಿನ ಮಾತ್ರ ಸಮಯ ಕೊಟ್ಟು ಉಳಿದ ದಿನಗಳಲ್ಲಿ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಬೇಕೆಂದು ಮನವಿ ಮಾಡಿದರು.

ಹಾಸನಾಂಬ ಜಾತ್ರೆಗೆ ಐತಿಹಾಸಿಕ ಮಹತ್ವವಿದೆ. ದೇವಿಯ ಫೋಟೋ ಅನ್ನು ಫ್ಲೆಕ್ಸ್, ಬ್ಯಾನರ್‌ಗಳಲ್ಲಿ ಹಾಕುವುದು ನಿಷಿದ್ಧ. ಅದನ್ನು ಕಡ್ಡಾಯವಾಗಿ ಜಾರಿಗೊಳಿಸಬೇಕು. ದೇವಸ್ಥಾನದಲ್ಲಿ ಫೋಟೊ ತೆಗೆಯುವರ ಸಂಖ್ಯೆ ಹೆಚ್ಚುತ್ತಿದ್ದು ಅದು ನಿಲ್ಲಬೇಕು. ಸರದಿ ಸಾಲಿನಲ್ಲಿ ನಿಲ್ಲುವ ಭಕ್ತರಿಗೆ ಸಮರ್ಪಕ ವ್ಯವಸ್ಥೆ ಕಲ್ಪಿಸಬೇಕು ಎಂದರು.

ಸಮಿತಿ ಕಾರ್ಯದರ್ಶಿ ಎನ್. ವೆಂಕಟೇಶ್‌ರಾಜು, ಸದಸ್ಯರಾದ ನಿಂಗೇಗೌಡ, ಸತೀಶ್, ಚಂದ್ರು, ತಿಮ್ಮಾಚಾರ್, ಗಿರೀಶ್, ಮಂಜುನಾಥ, ರಾಧಾ ತಿವಾರಿ ಇತರರಿದ್ದರು.

# ಜು. 7ಕ್ಕೆ ಇಂಧನ ಸಚಿವರ ಪ್ರವಾಸ

ಹಾಸನ: ಇಂಧನ ಸಚಿವ ಕೆ.ಜೆ. ಜಾರ್ಜ್ ಜು.7 ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಬೆಳಿಗ್ಗೆ 10 ಗಂಟೆಗೆ ಪಕ್ಷದ ಕಚೇರಿಗೆ ಭೇಟಿ ನೀಡುವರು. ಬೆ.11.30ಕ್ಕೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳೊಂದಿಗೆ ಇಂಧನ ಇಲಾಖೆಗೆ ಸಂಬಂಧಪಟ್ಟಂತೆ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ.

# ಎಂಸಿಇ ಕಾಲೇಜಿನಲ್ಲಿ ನವೋದ್ಯಮ ಹಬ್ಬ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಮಲೆನಾಡು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಮಂಗಳವಾರ ME-RIISE ಸಹಯೋಗದಲ್ಲಿ ನಮ್ಮ ಐಡಿಯಾ 2025 ರಾಜ್ಯ ಮಟ್ಟದ ನವೋದ್ಯಮ ಹಬ್ಬ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಸ್ಟಾರ್ಟ್‌ಅಪ್ ಕಂಪನಿ ಮತ್ತು ಅಂತಾರಾಷ್ಟ್ರೀಯ ಪಾಲುದಾರರು ಭಾಗವಹಿಸಿದ್ದರು. ಒಟ್ಟು 29 ಆವಿಷ್ಕಾರಗಳನ್ನು ವಿದ್ಯಾರ್ಥಿಗಳು ಮತ್ತು ಸ್ಟಾರ್ಟ್‌ಅಪ್ ತಂಡಗಳು ಪ್ರದರ್ಶಿಸಿದವು. ಕೃಷಿ ತಂತ್ರಜ್ಞಾನ, ಶಾಶ್ವತ ಸಂಚಾರಿ ವ್ಯವಸ್ಥೆ, ಆರೋಗ್ಯ ಸಾಧನ, ಸ್ಮಾರ್ಟ್ ಆಟೋಮೇಶನ್ ಹಾಗೂ ಸಾಮಾಜಿಕ ನಾವೀನ್ಯತೆ ಮುಂತಾದ ಕ್ಷೇತ್ರಗಳನ್ನು ಒಳಗೊಂಡಿವೆ.

ಕಾರ್ಯಕ್ರಮದಲ್ಲಿ ವಿಜಯ ಶಾಲೆಯ 10ನೇ ತರಗತಿ ವಿದ್ಯಾರ್ಥಿಗಳು, ಚಿಕ್ಕಮಗಳೂರಿನ ಎಐಟಿ ಶಾಲೆ, ಮೈಸೂರಿನ ವಿದ್ಯಾ ವಿಕಾಸ್ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರಿಂಗ್ ಟೆಕ್ನಾಲಜಿ, ಮೈಸೂರಿನ ವಿದ್ಯಾವರ್ಧಕ ಎಂಜಿನಿಯರಿಂಗ್ ಕಾಲೇಜು, ಬೆಂಗಳೂರಿನ ಜೆಎಸ್‌ಎಸ್ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಹೊಸ ಆವಿಷ್ಕಾರಗಳಿಗೆ 9 ಲಕ್ಷ ರೂ. ವರೆಗೆ ಅನುದಾನ ನೀಡುವ ಮಹತ್ತರ ಯೋಜನೆ ಇದಾಗಿದೆ.

ME-RIISE ಫೌಂಡೇಶನ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಎ. ಗೀತಾ ಕಿರಣ, ರಿಯಲಯನ್ಸ್ ಮಾಜಿ ಅಧ್ಯಕ್ಷ ಅನಂತ್ ರವಿ, ಇನ್‌ಯುನಿಟಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಜಾನ್ಸನ್ ಟೆಲ್ಲಿಸ್, ಹೂಡಿಕೆದಾರ ಡಾ. ಚೇತನ್ ಜಿ. ಶಿರ್ನಾಳಿ, ಎಂಸಿಇ ಉಪಾಧ್ಯಕ್ಷ ಅರ್ಜುನ ಗುರುದೇವ್ ಕಾರ್ಯಕ್ರಮದ ಭಾಗವಾಗಿದ್ದಾರೆ.

# ಜುಲೈ 7ಕ್ಕೆ ರೈತ ಸಂಘದಿಂದ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಂಟಿ ಕೃಷಿ ನಿರ್ದೇಶಕರು ಕಳಪೆ ಬಿತ್ತನೆ ಬೀಜ ವಿತರಿಸಿ ಅನ್ನದಾತರನ್ನು ಸಂಕಷ್ಟಕ್ಕೆ ಅವರ ವಿರುದ್ಧ ಕ್ರಮ ಜರುಗಿಸುವಂತೆ ಆಗ್ರಹಿಸಿ ಜುಲೈ 7 ರಂದು ನಗರದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ರೈತ ಸಂಘ-ಹಸಿರುಸೇನೆ ಜಿಲ್ಲಾಧ್ಯಕ್ಷ ಕಣಗಾಲ್ ಮೂರ್ತಿ ಹೇಳಿದರು.



ಸುದ್ದಿಗೋಷ್ಟಿಯಲ್ಲಿ ಮಂಗಳವಾರ ಮಾತನಾಡಿ, ಕಳಪೆ ಬಿತ್ತನೆ ಬೀಜ ವಿತರಣೆ ಮಾಡಿರುವುದರಿಂದಲೇ ಮೆಕ್ಕೆ ಜೋಳಕ್ಕೆ ಬಿಳಿ ಸುಳಿ ರೋಗ ಕಾಣಿಸಿಕೊಂಡಿದೆ. ರೈತರೇ ಸಂಗ್ರಹಿಸಿಕೊಂಡಿದ್ದ ಬಿತ್ತನೆ ಬೀಜ ಯಾವುದೇ ರೋಗಕ್ಕೆ ತುತ್ತಾಗಿಲ್ಲ. ಖಾಸಗಿ ಕಂಪನಿಯಿಂದ ಖರೀದಿ ಮಾಡಿದ್ದ ಬಿತ್ತನೆ ಬೀಜದಲ್ಲೇ ಸಮಸ್ಯೆ ಕಾಣಿಸಿಕೊಂಡಿದೆ. ಅಲ್ಲದೇ ಎರಡು ತಿಂಗಳ ಮೊದಲೇ ಬಿತ್ತನೆ ಬೀಜದ ಕಂಪನಿಯವರು ಕೃಷಿ ಇಲಾಖೆ, ಜಂಟಿ ಕೃಷಿ ನಿರ್ದೇಶಕರ ಹೆಸರು ಬಳಸಿಕೊಂಡು ಜೋಳಕ್ಕೆ ಬಿಳಿಸುಳಿ ರೋಗ ಕಾಣಿಸಿಕೊಂಡಿದೆ ಎಂದು ಕರಪತ್ರ ಮುದ್ರಿಸಿ ಪ್ರಚಾರ ಮಾಡಿದ್ದಾರೆ ಎಂದರು.

# ಅಚ್ಚುಕಟ್ಟು ಹಾಸನಾಂಬ ಜಾತ್ರೆಗೆ ಸಹಕರಿಸಿ

## ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ | ಪೂರ್ವ ಸಿದ್ಧತಾ ಸಭೆಯಲ್ಲಿ ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪ್ರಪಂಚಕ್ಕೆ ಹೆಸರುವಾಸಿಯಾದ ಹಾಸನಾಂಬ ಜಾತ್ರಾ ಮಹೋತ್ಸವವನ್ನುಎಲ್ಲರೂ ಒಗ್ಗಟ್ಟಿನಿಂದ ಒಂದು ತಂಡವಾಗಿ ಅಚ್ಚುಕಟ್ಟಾಗಿ ನಿರ್ವಹಿಸುವ ಮೂಲಕ ಬರುವ ಭಕ್ತಾದಿಗಳಿಗೆ ಸುಗಮ ದರ್ಶನಕ್ಕೆ ಅವಕಾಶ ಕಲ್ಪಿಸಿ ಜಿಲ್ಲೆಗೆ ಕೀರ್ತಿ ತರೋಣ ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಹಾಸನಾಂಬ ದೇವಿ ಜಾತ್ರಾ ಮಹೋತ್ಸವ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಭಕ್ತಾಧಿಕಾಗಳಿಗೆ ದೇವಿಯ ದರ್ಶನಕ್ಕೆ ಹೆಚ್ಚಿನ ಸಮಯ ಒದಗಿಸಲು ಅವಕಾಶ ಮಾಡಿಕೊಡಬೇಕು. ಸುರಕ್ಷತೆ, ಕುಡಿಯುವ ನೀರು, ಸ್ವಚ್ಛತೆಗೆ ಆದ್ಯತೆ ನೀಡಬೇಕು. ಈ ನಿಟ್ಟಿನಲ್ಲಿ ಸಾರ್ವಜನಿಕರ ಶೌಚಾಲಯ ನಿರ್ವಹಣೆ ಮತ್ತು ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು. ಸಮವಸ್ತ್ರ ಧರಿಸಿರಬೇಕು ಜೊತೆಗೆ ಸ್ವಚ್ಛತೆ ಸಂದರ್ಭದಲ್ಲಿ ಕಾರ್ಮಿಕರು ಸುರಕ್ಷತಾ ಪರಿಕರಗಳನ್ನು ಬಳಸುವಂತೆ ನೋಡಿಕೊಳ್ಳಲು ತಿಳಿಸಿದ ಅವರು ದಿನದಲ್ಲಿ ಸ್ವಚ್ಛತೆಗೆ ಮೂರು ಬ್ಯಾಚ್ ಮಾಡುವಂತೆ ಸೂಚಿಸಿದರಲ್ಲದೆ, ಮೇಲ್ವಿಚಾರಣೆ ಮಾಡುವಂತೆ ನಿರ್ದೇಶನ ನೀಡಿದರು.




### ಅಂಗವಿಕಲರಿಗೆ ವಿಶೇಷ ವ್ಯವಸ್ಥೆ

ವಿಶೇಷ ಚೇತನರಿಗೆದೇವಿ ದರ್ಶನಕ್ಕೆ ಅವಕಾಶ ಕಲ್ಪಿಸಿ ಎಂದ ಅವರು, ಸುಸಜ್ಜಿತ ಅಂಬುಲೆನ್ಸ್, ಪ್ರಥಮ ಚಿಕಿತ್ಸೆಗೆ ಅಗತ್ಯ ಔಷಧಿ, ತುರ್ತು ಸಂದರ್ಭದಲ್ಲಿ ಅನುಕೂಲವಾಗುವಂತೆ ವ್ಯವಸ್ಥೆ ಮಾಡಿಕೊಳ್ಳುವಂತೆ ತಿಳಿಸಿದರು.

ಸರದಿ ಸಾಲಿನಲ್ಲಿ ನಿಲ್ಲುವ ಭಕ್ತರಿಗೆ ಮಜ್ಜಿಗೆ, ಪಾನಕ ಹಾಗೂ ಪ್ರಸಾದ ರೂಪದಲ್ಲಿ ನೀಡುವ ಮುನ್ನ ಗುಣಮಟ್ಟದ ಬಗ್ಗೆ ಪರೀಕ್ಷೆ ನಡೆಸಿದ ನಂತರ ಭಕ್ತರಿಗೆ ವಿತರಣೆ ಮಾಡಲು ಕ್ರಮ ಕೈಗೊಳ್ಳಬೇಕು. ನಿಗಾ ವಹಿಸಲು ಸಿಸಿಟಿವಿ ಅಳವಡಿಸಬೇಕು ಎಂದು ಸೂಚಿಸಿದರು.

ಪ್ರತಿದಿನ ನಡೆಯುವ ಕಾರ್ಯಕ್ರಮದ ಬಗ್ಗೆ ವೆಬ್‌ಸೈಟ್‌ನಲ್ಲಿ ಹಾಕುವಂತೆ ಸೂಚಿಸಿದರು. ಕೆಎಸ್‌ಆರ್‌ಟಿಸಿ, ರೈಲ್ವೆ, ಸಾರಿಗೆ ಇಲಾಖೆ ಅಧಿಕಾರಿಗಳು ಪ್ರತಿದಿನ ಆಗಮಿಸುವ ವಾಹನಗಳ ಬಗ್ಗೆ ಮಾಹಿತಿ ನೀಡುವಂತೆ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ವೆಂಕಟೇಶ್ ನಾಯ್ಡು, ಉಪವಿಭಾಗಾಧಿಕಾರಿ ಹಾಗೂ ದೇವಾಲಯ ಆಡಳಿತಾಧಿಕಾರಿ ಮಾರುತಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

ಹೂವಿನ ಅಲಂಕಾರದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಾಡಿರುವ ಅಲಂಕಾರ ಪುನರಾವರ್ತನೆ ಆಗದಂತೆ ನಿಗಾ ವಹಿಸಬೇಕು. ತಾಂತ್ರಿಕತೆಯನ್ನು ಬಳಸಿಕೊಂಡು ಕಡಿಮೆ ಸ್ಥಳ ಬಳಸಿಕೊಂಡು ಉತ್ತಮ ರೀತಿಯಲ್ಲಿ ಅಲಂಕಾರಕ್ಕೆ ಒತ್ತು ನೀಡುವಂತೆ ತಿಳಿಸಿದರು.

ಟೆಂಡರ್ ಡಾಕ್ಯುಮೆಂಟ್ ಅನ್ನು ಸಂಬಂಧಪಟ್ಟ ಅಧಿಕಾರಿಗಳು ಒಮ್ಮೆ ಪರಿಶೀಲನೆ ಮಾಡಿ ಸುರಕ್ಷತೆ ಬಹಳ ಮುಖ್ಯ.

ಆ ಕಾರಣಕ್ಕೆ ಯಾವುದೇ ನ್ಯೂನ್ಯತೆಗಳು ಆಗದಂತೆ ಎಚ್ಚರಿಕೆ ವಹಿಸಿ ಕ್ರಮ ವಹಿಸಬೇಕು ಎಂದು ತಿಳಿಸಿದರು.

ಅಂದಾಜು ಒಂದು ದಿನಕ್ಕೆ ಎಷ್ಟು ಜನ ಬರುತ್ತಾರೆ ಎಂಬುದನ್ನು ಪರಿಗಣಿಸಿ ಅಗತ್ಯ ಬ್ಯಾರಿಕೇಡಿಂಗ್ ಸಿದ್ಧತೆಗೆ ಕ್ರಮ ವಹಿಸಬೇಕು. ದೇವಸ್ಥಾನದ ಆವರಣ ಹಾಗೂ ನಗರದ ವೃತ್ತಗಳಲ್ಲಿ ಎಲ್.ಇ.ಡಿ ಮೂಲಕ ನೇರ ಪ್ರಸಾರ ಮಾಡುವ ಸಂದರ್ಭದಲ್ಲಿ ಜನಸಂದಣಿ ಮತ್ತಿತರ ಮಾಹಿತಿಗಳನ್ನು ನೀಡಲು ಕ್ರಮ ಕೈಗೊಳ್ಳಬೇಕು ಎಂದರು.

### ಮಳೆ ಹಾನಿ ವರದಿಗೆ ಸೂಚನೆ

ಜಿಲ್ಲೆಯಲ್ಲಿ ಮುಂಗಾರು ಮಳೆಯಿಂದ ಹಾನಿಯಾಗಿರುವುದಕ್ಕೆ ಪರಿಹಾರ ನೀಡಲು ಸಹಕಾರಿಯಾಗುವಂತೆ ಹಾನಿಯಾಗಿರುವ ಬಗ್ಗೆ ಇಲಾಖಾವಾರು ಮಾಹಿತಿ ತಯಾರಿಸುವಂತೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿ, ಮುಸುಕಿನ ಜೋಳಕ್ಕೆ ಬಿಳಿಸುಳಿ ರೋಗ ಕುರಿತು ಗ್ರಾಮ ಪಂಚಾಯಿತಿವಾರು ವರದಿ ನೀಡುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಯಾವ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂಬುದರ ಬಗ್ಗೆ ಮಾಹಿತಿ ಒದಗಿಸುವಂತೆ ಸೂಚಿಸಿದರು.

ಯಾವ ಯಾವ ರೀತಿಯ ರಸಗೊಬ್ಬರಗಳು ಎಲ್ಲೆಲ್ಲಿ ಯಾವ ಪ್ರಮಾಣದಲ್ಲಿ ದಾಸ್ತಾನಿದೆ ಎಂಬ ಮಾಹಿತಿಯನ್ನು ಪ್ರತ್ಯೇಕವಾಗಿ ನೀಡಬೇಕು. ಜಿಲ್ಲೆಯ ಒಟ್ಟು ಕೃಷಿ ಪ್ರದೇಶದಲ್ಲಿ ನೀರಾವರಿ, ಮಳೆಯಾಶ್ರಿತ ಪ್ರದೇಶ ಎಷ್ಟು ಹಾಗೂ ಬಿತ್ತನೆ ಆಗಿರುವ ಪ್ರದೇಶದ ಬಗ್ಗೆ ವರದಿ ನೀಡುವಂತೆ ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕ ಪಿ. ರಮೇಶ್ ಕುಮಾರ್, ತೋಟಗಾರಿಕೆ ಇಲಾಖೆ ಉಪ ನಿರ್ದೇಶಕಿ ಮಂಗಳಾ, ಲೋಕೋಪಯೋಗಿ ಇಲಾಖೆ ಕಾರ್ಯ ಪಾಲಕ ಅಭಿಯಂತರ ಗಿರೀಶ್, ಸಣ್ಣ ನೀರಾವರಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಾಮಚಂದ್ರ ಮತ್ತಿತರರಿದ್ದರು.

# ಮರಣೋತ್ತರ ಪರೀಕ್ಷೆ ಕಡ್ಡಾಯ: ಜಿಲ್ಲಾಧಿಕಾರಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ಹೃದಯಾಘಾತ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಆಕಸ್ಮಿಕ ಸಾವುಇ ಸಂಭವಿಸಿದರೂ ಕಡ್ಡಾಯವಾಗಿ ಮರಣೋತ್ತರ ವೈದ್ಯಕೀಯ ಪರೀಕ್ಷೆ ನಡೆಯಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಸೂಚಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಚಿಕ್ಕ ವಯಸ್ಸಿನವರು ಹೃದಯಾಘಾತದಿಂದ ಸಾವನ್ನಪ್ಪುತ್ತಿದ್ದಾರೆ ಎಂಬ ಮಾಹಿತಿ ಬಂದಿದೆ. ಈ ಸಂಬಂಧ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ, ಹಿಮ್ಸ್ ನಿರ್ದೇಶಕರ ಜೊತೆ ಸಭೆ ನಡೆಸಲಾಗಿದೆ. ಈ ಬಗ್ಗೆ ವಿಸ್ತೃತ ವರದಿಯನ್ನು ಕೊಡಲು ಡಿಹೆಚ್‌ಓಗೆ ಹೇಳಿದ್ದೇವೆ ಎಂದರು.

ಈಗಾಗಲೇ ಜಿಲ್ಲಾ ಮಟ್ಟದಲ್ಲಿ ಸಮಿತಿ ರಚಿಸಲಾಗಿದೆ. ಡಿಹೆಚ್‌ಓ, ಹಿಮ್ಸ್ ನಿರ್ದೇಶಕರು, ಮೆಡಿಸನ್ ಡಿಪಾರ್ಟ್ಮೆಂಟ್‌ನ ವೈದ್ಯಾಧಿಕಾರಿಗಳು ಒಳಗೊಂಡಂತೆ ಐದು ಜನರ ಸಮಿತಿ ರಚಿಸಲಾಗಿದೆ. ಮೃತಪಟ್ಟವರ ಮಾಹಿತಿ ಕಲೆ ಹಾಕಬೇಕು. ಅವರ ಸಾವಿಗೆ ಕಾರಣಗಳು, ಎಲ್ಲಿ ಆಗಿದೆ, ಹೇಗೆ ಆಗಿದೆ, ಮರಣೋತ್ತರ ಪರೀಕ್ಷೆ ವರದಿ, ಮರಣ ಪ್ರಮಾಣ ಪತ್ರ ಎಲ್ಲವನ್ನೂ ತಿಳಿದುಕೊಳ್ಳಲು ಸೂಚನೆ ನೀಡಲಾಗಿದೆ. ಈ ಎಲ್ಲಾ ಅಂಶಗಳ ಬಗ್ಗೆ ಪರಿಶೀಲನೆ ನಡೆಸಲಿದ್ದಾರೆ ಎಂದು ಹೇಳಿದರು.

ಮರಣೋತ್ತರ ವೈದ್ಯಕೀಯ ಪರೀಕ್ಷೆ ವರದಿ ಬಗ್ಗೆ ಮೊದಲು ಸಮಾಲೋಚನೆ ನಡೆಸಿ ಮಾಹಿತಿ ಕೊಡಬೇಕು. ಬೇರೆ ಖಾಯಿಲೆಗಳಿಂದ ಬಳಲುತ್ತಿದ್ದಾರಾ ಎಂಬ ಮಾಹಿತಿ ಕಲೆ ಹಾಕಬೇಕು. ನಿಖರವಾಗಿ ಇಷ್ಟು ಮಂದಿ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ ಎಂಬ ಅಂಶ ಇನ್ನೂ ಕೊಟ್ಟಿಲ್ಲ, ಜಿಲ್ಲಾ ಆರೋಗ್ಯಾಧಿಕಾರಿ ಅಧ್ಯಕ್ಷತೆಯಲ್ಲಿ ಹಿಮ್ಸ್ ನಿರ್ದೇಶಕರು, ಹೃದ್ರೋಗ ತಜ್ಞರು ಸಮಿತಿಯಲ್ಲಿ ಇರಲಿದ್ದಾರೆ. ಒಂದು ವಾರದೊಳಗೆ ಅವರು ವರದಿಯನ್ನು ಸಲ್ಲಿಸಬೇಕು ಎಂದು ತಿಳಿಸಲಾಗಿದೆ ಎಂದರು.

ತುರ್ತು ಪರಿಸ್ಥಿತಿಯಲ್ಲಿ ಚಿಕಿತ್ಸೆ ನೀಡಲು ಅಗತ್ಯ ಔಷಧಿ, ಇಂಜೆಕ್ಷನ್ ಇರಬೇಕು. ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ರಕ್ತ ಹೆಪ್ಪುಗಟ್ಟುವಿಕೆ ತಡೆಯಲು ಮೆಡಿಸನ್ ಸ್ಟಾಕ್ ಇಟ್ಟುಕೊಳ್ಳಲು ಸೂಚನೆ ನೀಡಲಾಗಿದೆ. ನಮ್ಮಲ್ಲಿ ಸದ್ಯ ಆ ಸಂಬಂಧಪಟ್ಟ ಔಷಧಕ್ಕೆ ಯಾವುದೇ ಕೊರತೆಯಿಲ್ಲ. ಮುಂದಿನ ಸಭೆಯಲ್ಲಿ ಖಾಸಗಿ ಆಸ್ಪತ್ರೆಯ ಮುಖ್ಯಸ್ಥರು ಭಾಗವಹಿಸಬೇಕು, ಅವರ ಆಸ್ಪತ್ರೆಗಳಿಲ್ಲಿ ಔಷಧಿಗಳು ಇರಬೇಕು, ಜನರಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದರು.

# ವಾಣಿಜ್ಯ ಸ್ಥಾಯಿ ಸಮಿತಿ ಸಭೆಯಲ್ಲಿ ಸಂಸದರು ಭಾಗಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ನವದೆಹಲಿ: ದೇಶದ ಆರ್ಥಿಕತೆ ಮತ್ತು ನಾಗರಿಕರ ಆರೋಗ್ಯಕ್ಕೆ ನೇರವಾಗಿ ಸಂಬಂಧಿಸಿದ ಮಹತ್ವದ ಚರ್ಚೆಯಲ್ಲಿ ಸಂಸದ ಶ್ರೇಯಸ್ ಪಟೇಲ್ ಅವರು ನವದೆಹಲಿಯಲ್ಲಿ ನಡೆದ ಇಲಾಖಾ ಸ್ಥಾಯಿ ಸಮಿತಿ (ವಾಣಿಜ್ಯ) ಸಭೆಯಲ್ಲಿ ಭಾಗವಹಿಸಿದ್ದರು.

ಈ ಸಭೆಯಲ್ಲಿ ಸರಕು ಮಂಡಳಿಗಳ ಕಾರ್ಯಕ್ಷಮತೆ ಮತ್ತು ಭಾರತೀಯ ಆಹಾರ ಸುರಕ್ಷತೆ ಹಾಗೂ ಗುಣಮಟ್ಟದ ಕುರಿತು ವಿಸ್ತೃತ ಸಮಾಲೋಚನೆ ನಡೆಸಲಾಯಿತು. ವಾಣಿಜ್ಯ ವ್ಯವಹಾರಗಳ ಇಲಾಖೆ ಕಾರ್ಯದರ್ಶಿ ಹಾಗು ಎಐ ಪ್ರತಿನಿಧಿಗಳ ಜೊತೆ ನಡೆದ ಚರ್ಚೆಯಲ್ಲಿ ಪಾಲ್ಗೊಂಡು ತಮ್ಮ ಅಭಿಪ್ರಾಯ ಹಂಚಿಕೊಂಡರು.

ಸರಕು ಮಂಡಳಿಗಳ ಸುಧಾರಣೆ ಮತ್ತು ಆಹಾರ ಸುರಕ್ಷತಾ ಮಾನದಂಡಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು. ವಾಣಿಜ್ಯ ವ್ಯವಹಾರಗಳ ಸ್ಥಾಯಿ ಸಮಿತಿ ಅಧ್ಯಕ್ಷ ದೋಲಾ ಸೇನ್ ಸಭೆಯ ನೇತೃತ್ವ ವಹಿಸಿದ್ದರು. ಸಮಿತಿಯ ಇತರೆ ಸದಸ್ಯರು ಕೂಡ ಈ ಪ್ರಮುಖ ಚರ್ಚೆಯಲ್ಲಿ ಹಾಜರಿದ್ದು, ನೀತಿ ನಿರೂಪಣೆಗೆ ಅಗತ್ಯ ಒಳನೋಟಗಳನ್ನು ನೀಡಿದರು.

ಈ ಬಗ್ಗೆ ಪ್ರತಿಕ್ರಿಯಿಸಿದರು ಸಂಸದ ಶ್ರೇಯಸ್ ಪಟೇಲ್ ಅವರು, ಸಂಸತ್ತಿನ ಸ್ಥಾಯಿ ಸಮಿತಿಗಳು ವಿವಿಧ ಸಚಿವಾಲಯಗಳ ಕಾರ್ಯವೈಖರಿ ಮತ್ತು ನೀತಿಗಳನ್ನು ಪರಿಶೀಲಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಈ ಹಿನ್ನಲೆ ವಾಣಿಜ್ಯ ವ್ಯವಹಾರಗಳ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರಕು ಮಂಡಳಿಗಳ ಕಾರ್ಯವೈಖರಿ ಮತ್ತು ಅವುಗಳ ದೇಶದ ಆರ್ಥಿಕತೆ ಹಾಗೂ ರಫ್ತು ಕ್ಷೇತ್ರಕ್ಕೆ ನೀಡುತ್ತಿರುವ ಕೊಡುಗೆಯ ಕುರಿತು ಸಭೆಯಲ್ಲಿ ಆಳವಾದ ಚರ್ಚೆ ನಡೆಯಿತು. ಇದೇ ವೇಳೆ, ದೇಶಾದ್ಯಂತ ಆಹಾರ ಉತ್ಪನ್ನಗಳ ಗುಣಮಟ್ಟ ಮತ್ತು ಸುರಕ್ಷತೆಯನ್ನು ಖಾತ್ರಿಪಡಿಸುವ ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ ದ ಕಾರ್ಯವೈಖರಿ ಹಾಗೂ ಸವಾಲುಗಳ ಬಗ್ಗೆಯೂ ಗಂಭೀರವಾಗಿ ಪರಿಶೀಲಿಸಲಾಯಿತು ಎಂದು ತಿಳಿಸಿದರು.

# ಏತ ನೀರಾವರಿ ಯೋಜನೆಯಿಂದ ರೈತರಿಗೆ ಅನುಕೂಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ತಾಲ್ಲೂಕಿನ ಬಹುತೇಕ ಏತ ನೀರಾವರಿ ಯೋಜನೆಗಳು ಪೂರ್ಣಗೊಂಡು ಕೆರೆಗಳು ತುಂಬಿರುವುದರಿಂದ ರೈತರಿಗೆ ಹೆಚ್ಚಿನ ಅನುಕೂಲವಾಗಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ದ್ಯಾವನಹಳ್ಳಿ ಗ್ರಾಮದ ಬಳಿ ಇರುವ ಹೇಮಾವತಿ ಮುಖ್ಯ ನಾಲೆಯ ಜಾಕ್‌ವೆಲ್‌ನಲ್ಲಿ ಬಾಗೂರು ಹಾಗೂ ನುಗ್ಗೇಹಳ್ಳಿ ಏತ ನೀರಾವರಿ ಯೋಜನೆಯ ನೀರೆತ್ತುವ ಮೋಟಾರ್‌ಗೆ ಚಾಲನೆ ನೀಡಿ ಮಾತನಾಡಿದರು.

ಈ ವರ್ಷ ಹೇಮಾವತಿ ಜಲಾಶಯ ಜೂನ್ ತಿಂಗಳ ಅಂತ್ಯದೊಳಗೆ ತುಂಬಿರುವುದರಿಂದ ನಾಲೆಗಳಿಗೆ ಬೇಗ ನೀರನ್ನು ಬಿಡಲಾಗಿದೆ. ಇದರಿಂದ ತಾಲ್ಲೂಕಿನ ಬಹುತೇಕ ಕೆರೆಗಳನ್ನುತುಂಬಿಸಲು ಸಾಧ್ಯವಾಗಿದೆ ಎಂದರು.

ಏತ ನೀರಾವರಿ ಯೋಜನೆ ವ್ಯಾಪ್ತಿಯಲ್ಲಿ ವಿದ್ಯುತ್ ಇಲಾಖೆ ಅಧಿಕಾರಿಗಳು ಎಲ್‌ಸಿ ನೀಡದಂತೆ ನೋಡಿಕೊಳ್ಳಬೇಕು. ಇದರಿಂದ ಯೋಜನೆ ವ್ಯಾಪ್ತಿಯಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡರೆ ಪೈಪ್‌ಲೈನ್ ಮೂಲಕ ನೀರು ಹರಿಸಲು ಹೆಚ್ಚು ಕಷ್ಟವಾಗುತ್ತದೆ. ಈ ಬಗ್ಗೆ ಅಧಿಕಾರಿಗಳು ಗಮನ ಹರಿಸಬೇಕು. ಪ್ರತಿದಿನ ವ್ಯಯವಾಗುವಂತೆ ನೋಡಿಕೊಂಡರೆ ಬಹುಬೇಗ ಕೆರೆಗಳನ್ನು ತುಂಬಿಸಬಹುದು ಎಂದು ಸೂಚಿಸಿದರು.

ನುಗ್ಗೇಹಳ್ಳಿ ಹಾಗೂ ಬಾಗೂರು ಏತ ನೀರಾವರಿ ಯೋಜನೆ ವ್ಯಾಪ್ತಿಯಲ್ಲಿ 25ಕ್ಕೂ ಹೆಚ್ಚು ಕೆರೆಗಳು ಬರಲಿದ್ದು ಈ ಹಂಗಾಮಿನಲ್ಲಿ ಎಲ್ಲಾ ಕೆರೆ ತುಂಬಿಸಲು ಶ್ರಮವಹಿಸಲಾಗುವುದು ಎಂದು ಭರವಸೆ ನೀಡಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಬಿ.ಹೆಚ್. ಶಿವಣ್ಣ, ಗ್ರಾಪಂ ಅಧ್ಯಕ್ಷ ಕೆಂಪೇಗೌಡ, ಹೇಮರಾಜ್, ಕೃಷಿ ಪತ್ತಿನ ಅಧ್ಯಕ್ಷ ಡಿ.ಎನ್. ನಾಗರಾಜ್, ಗ್ರಾಪಂ ಸದಸ್ಯ ಸ್ವಾಮಿಗೌಡ, ಆಟೋ ಶಂಕರ್, ಮುಖಂಡರಾದ ಮರಿ ದೇವೇಗೌಡ, ಓಬಳಾಪುರ ಬಸವರಾಜ್, ತೋಟಿ ನಾಗರಾಜ್, ಶಿವಶಂಕರ ಕುಂಟೆ, ಹುಲಿಕೆರೆ ಸಂಪತ್ ಕುಮಾರ್, ಪುಟ್ಟಸ್ವಾಮಿ, ವಿಎನ್ ಮಂಜುನಾಥ್, ತಗಡೂರು ನಾಗರಾಜ್, ಗುತ್ತಿಗೆದಾರ ಕಿರಣ್, ಪೋಲಿಸ್ ಬೆಟ್ಟಯ್ಯ, ಸ್ಟುಡಿಯೋ ರಘು, ಕಾವೇರಿ ನೀರಾವರಿ ನಿಗಮದ ಎಇ ಮಂಜುನಾಥ, ಸಹಾಯಕ ಎಂಜಿನಿಯರ್‌ಗಳಾದ ಪುನೀತ್, ವಿಜಯಕುಮಾರ್ ಮತ್ತಿತರರಿದ್ದರು.

# ಅಂಚೆ ಕಚೇರಿಯಲ್ಲಿ ಕಳವಿಗೆ ವಿಫಲ ಯತ್ನ

ಹಾಸನ: ತಾಲ್ಲೂಕಿನ ಕಂದಲಿ ಅಂಚೆ ಕಚೇರಿ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು ಕಳ್ಳತನಕ್ಕೆ ವಿಫಲ ಯತ್ನ ನಡೆಸಿದ್ದಾರೆ.

ಉಪ ಅಂಚೆಪಾಲಕ ಎಲ್.ಸಿ. ಮಹೇಶ್ ಅವರು ಜೂ. 28 ರಂದು ಕರ್ತವ್ಯ ಮುಗಿಸಿ ಎಂದಿನಂತೆ ದಾಖಲಾತಿಗಳನ್ನು ಭದ್ರಪಡಿಸಿ ಬಾಗಿಲು ಹಾಕಿ ತೆರಳಿದ್ದರು. ಜೂ. 30ರ ಸೋಮವಾರ ಕಚೇರಿಗೆ ಬಂದು ನೋಡಿದಾಗ ಬಾಗಿಲು ಮುರಿದಿರುವುದು ಗೊತ್ತಾಗಿದೆ.

ಬಲವಾದ ಆಯುಧದಿಂದ ಬಾಗಿಲು ಒಡೆದು ಒಳನುಗ್ಗಿರುವ ಕಳ್ಳರು ಕೆಲವೊಂದು ಪಾರ್ಸಲ್‌ಗಳನ್ನು ತೆರೆದು ಬಿಸಾಡಿದ್ದಾರೆ. ಹಣ ಇಟ್ಟಿದ್ದ ಪೆಟ್ಟಿಗೆಯನ್ನು ಎಳೆದಾಡಿದ್ದಾರೆಯಾದರೂ ಹಣ ಕಳವು ಮಾಡಿಲ್ಲ. ಜೊತೆಗೆ ಯಾವ ವಸ್ತುಗಳು ಕಳುವಾಗಿಲ್ಲ. ಕಳ್ಳರ ಉದ್ದೇಶ ಏನಿತ್ತು ಎಂಬುದು ನಿಗೂಢವಾಗಿದೆ. ಪ್ರಕರಣ ದಾಖಲಿಸಿಕೊಂಡಿರುವ ನಗರ ಠಾಣೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ.

# ಮಕ್ಕಳ ಮೇಲಿನ ದೌರ್ಜನ್ಯ ನಿಲ್ಲಲಿ: ಶಿವಲಿಂಗೇಗೌಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಅರಸೀಕೆರೆ: ಆಧುನಿಕ ಯುಗ ಎಷ್ಟೇ ಮುಂದುವರೆದಿದ್ದರೂ ಅಪ್ರಾಪ್ತ ಮಕ್ಕಳ ಮೇಲಿನ ದೌರ್ಜನ್ಯ ಕಡಿಮೆಯಾಗದಿರುವುದು ಆತಂಕಕಾರಿ ವಿಷಯವಾಗಿದೆ. ನಾಗರಿಕ ಸಮಾಜವು ಎಚ್ಚೆತ್ತು ಮಕ್ಕಳ ರಕ್ಷಣೆಗೆ ಮುಂದಾಗಬೇಕೆಂದು ಗೃಹಮಂಡಳಿ ಅಧ್ಯಕ್ಷ ಕೆ.ಎಂ.ಶಿವಲಿಂಗೇಗೌಡ ತಿಳಿಸಿದರು.

ನಗರದ ರೈಲು ನಿಲ್ದಾಣದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಸ್ಥಾಪಿಸಲಾದ ಮಕ್ಕಳ ಸಹಾಯವಾಣಿ ಘಟಕ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಲಿಂಗ ಬೇಧವಿಲ್ಲದೇ ಅಪ್ರಾಪ್ತ ಮಕ್ಕಳನ್ನು ಕಾನೂನು ಬಾಹಿರ ಚಟುವಟಿಕೆಗಳಿಗೆ ಕದ್ದೊಯ್ದರೆ, ಮತ್ತೊಂದೆಡೆ ಇದೇ ವಯಸ್ಸಿನ ಮಕ್ಕಳು ಮನೆಯಲ್ಲಿ ಪೋಷಕರೊಂದಿಗೆ ಮುನಿಸಿಕೊಂಡು, ವಿವಿಧ ಸಂದರ್ಭಗಳಿಗೆ ಮನೆ, ಊರು ಕೇರಿಗಳನ್ನು ಬಿಟ್ಟು ನೂರಾರು ಕಿ.ಮೀ ದೂರದ ಊರುಗಳಿಗೆ ರೈಲು ಬಸ್‌ಗಳಲ್ಲಿ ಬರುತ್ತಿದ್ದಾರೆ. ಇಂತಹ ಮಕ್ಕಳನ್ನು ಭೀಕ್ಷಾಟನೆ ಸೇರಿ ವಿವಿಧ ಕೃತ್ಯಗಳಿಗೆ ಬಳಸಲಾಗುತ್ತಿರುವುದು ಆಘಾತಕಾರಿ ವಿಚಾರ ಎಂದರು.

ಈ ಮಕ್ಕಳನ್ನು ಸಂರಕ್ಷಿಸಲು ಜಿಲ್ಲಾ ಮಕ್ಕಳ ರಕ್ಷಣಾ ಘಟಕವು ಅರಸೀಕೆರೆಯಲ್ಲಿ ಚೈಲ್ಡ್ ಹೆಲ್ಪ್ ಲೈನ್ ಡೆಸ್ಕ್ ತೆರೆದಿರುವುದು ಸ್ವಾಗತಾರ್ಹ. ಅರಸೀಕೆರೆ ತಾಲ್ಲೂಕಿನಲ್ಲೂ 20 ಕೋಟಿ ರೂ. ವೆಚ್ಚದಲ್ಲಿ ಅನಾಥರಿಗೆ ಆಶ್ರಯ ನೀಡಲು ಆಶ್ರಯ ತಾಣಗಳನ್ನು ನಿರ್ಮಿಸಲಾಗುತ್ತಿದೆ. ಪೋಷಕರು ಅಪ್ರಾಪ್ತ ಮಕ್ಕಳಿಗೆ ಶಿಕ್ಷಣ ಕೊಡಿಸುವಲ್ಲಿ ಹೆಚ್ಚಿನ ಗಮನ ಹರಿಸಬೇಕು. ಅದರಿಂದ ಮಕ್ಕಳು ಉತ್ತಮ ಪ್ರಜೆಗಳಾಗಿ ಬೆಳೆಯುವುದರ ಮೂಲಕ ದೇಶದ ಆಸ್ತಿಯಾಗುತ್ತಾರೆ ಎಂದರು.

ಮಕ್ಕಳ ರಕ್ಷಣಾಧಿಕಾರಿ ಕೆ.ಜಿ. ದಿಲೀಪ್ ಮಾತನಾಡಿ, 1098 ನಂಬರಿಗೆ ಉಚಿತ ಕರೆ ಮಾಡುವುದರ ಮೂಲಕ ದಿನದ 24 ಗಂಟೆಗಳಲ್ಲೂ ಮಕ್ಕಳ ಸಹಾಯವಾಣಿಯನ್ನು ಸಂಪರ್ಕಿಸಬಹುದಾಗಿದೆ. ಈ ಸಂಖ್ಯೆಯು ರಾಜ್ಯಾದ್ಯಂತ ಕಾರ್ಯ ನಿರ್ವಹಿಸುತ್ತಿದೆ. ಅಪ್ರಾಪ್ತ ಮಕ್ಕಳ ಬಗ್ಗೆ ಮಾಹಿತಿ ನೀಡಬಹುದಾಗಿದೆ. ಪೋಷಕರು ಮತ್ತು ಶಿಕ್ಷಕರು ಮಕ್ಕಳಲ್ಲಿ ಸುರಕ್ಷಿತ ಮತ್ತು ಅಸುರಕ್ಷಿತ ಸ್ಪರ್ಶಗಳ ಬಗ್ಗೆ ಅರಿವು ಮೂಡಿಸಬೇಕು. ಈ ಅರಿವು ಲಿಂಗ ಬೇಧವಿಲ್ಲದೇ ಎಲ್ಲ ಮಕ್ಕಳಿಗೂ ಅನ್ವಯಿಸುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಪ್ರಮುಖ ಯೋಜನೆ ಇದಾಗಿದ್ದು, ಈ ಯೋಜನೆ ಮೂಲಕ ಭಿಕ್ಷಾಟನೆ ಮಾಡುತ್ತಿರುವ ಮಕ್ಕಳು, ಬಾಲಕಾರ್ಮಿಕ ಮಕ್ಕಳು, ಕಾಣೆಯಾದ ಮಕ್ಕಳು, ಒಂಟಿಯಾಗಿ ಅಳುತ್ತಿರುವ ಮಕ್ಕಳು, ಮಾದಕವ್ಯಸನಿ ಮಕ್ಕಳು, ಪರಿತ್ಯಕ್ತ ಮಕ್ಕಳು, ಬಾಲ್ಯ ವಿವಾಹವಾದ ಮಕ್ಕಳು, ಲೈಂಗಿಕ ದೌರ್ಜನ್ಯ, ಹಿಂಸೆ ಮತ್ತು ಅತ್ಯಾಚಾರ, ಶಿಕ್ಷಣ ವಂಚಿತ ಮಕ್ಕಳನ್ನು ಸಂರಕ್ಷಿಸುವುದೇ ನಮ್ಮ ಧ್ಯೆಯವಾಗಿದೆ ಎಂದರು.

ಕಾರ್ಮಿಕ ಇಲಾಖೆ ನಿರೀಕ್ಷಕಿ ಶಶಿಕಲಾ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಗೀಜಿಹಳ್ಳಿ ಧರ್ಮಶೇಖರ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಯೋಗೀಶ್, ರೈಲ್ವೇ ರಕ್ಷಣಾ ಇಲಾಖೆ ಬಸವರಾಜು, ರಾಕೇಶ್ ಕುಮಾರ್, ಮುಖಂಡರಾದ ಚಿಕ್ಕನಹಳ್ಳಿ ಮಲ್ಲೇಶ್, ಯಳವಾರೆ ನಾಗರಾಜು ಇದ್ದರು.

# ಪೊಲೀಸರಿಗೆ ಇ-ಸಾಕ್ಷ್ಯ ಆ್ಯಪ್ ಮಾಹಿತಿ ಕಾರ್ಯಾಗಾರ



ಹಾಸನ: ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಗಳ ತನಿಖಾ ಸಹಾಯಕ ಹಾಗೂ ಕಂಪ್ಯೂಟರ್ ಕರ್ತವ್ಯ ಸಿಬ್ಬಂದಿಗೆ ಇ-ಸಾಕ್ಷಾ ಮೊಬೈಲ್ ಆ್ಯಪ್ ಬಳಕೆ ಕುರಿತು ಮಂಗಳವಾರ ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ಒಂದು ದಿನದ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ಅಪರಾಧ ಪ್ರಕರಣಗಳಲ್ಲಿ ಸಾಕ್ಷ್ಯ ಸಂಗ್ರಹಕ್ಕಾಗಿ ಪೊಲೀಸ್ ಇಲಾಖೆ ಇ-ಸಾಕ್ಷ್ಯ ಆ್ಯಪ್ ಅನ್ನು ಅಳವಡಿಸಿಕೊಂಡಿದೆ. ಅಪರಾಧ ನಡೆದ ಸ್ಥಳದಲ್ಲಿ ಪೋಟೊ ಅಥವಾ ವಿಡಿಯೋ ಚಿತ್ರೀಕರಿಸಿ ಅದನ್ನು ಇಲಾಖೆಯ ವೆಬ್‌ಸೈಟ್‌ಗೆ ಅಪ್ಲೋಡ್ ಮಾಡುವ ಪ್ರಕ್ರಿಯೆ ಇದಾಗಿದೆ. ತನಿಖಾಧಿಕಾರಿಗಳಿಗೆ ಇದು ಅತ್ಯುಪಯುಕ್ತ ಸಾಧನವಾಗಿದ್ದು ಬಳಕೆ ಮತ್ತು ಸಾಧಕಗಳ ಕುರಿತು ಸಂಪನ್ಮೂಲ ವ್ಯಕ್ತಿ ಪೊಲೀಸರಿಗೆ ಮಾಹಿತಿ ನೀಡಿದರು.

# ಇತಿಹಾಸದಲ್ಲಿ ಈ ದಿನ

## ಜುಲೈ -02

**1776:** ಅಮೆರಿಕದ 13 ಕಾಲನಿಗಳು ಬ್ರಿಟನ್‌ನಿಂದ ಮುಕ್ತವಾದುವೆಂದು ಘೋಷಿಸಿಕೊಂಡವು. ಇದನ್ನು ಅಮೆರಿಕ ಸ್ವಾತಂತ್ರ್ಯದ ಮುಖ್ಯ ದಿನವೆಂದು ಇತಿಹಾಸಕಾರರು ಪರಿಗಣಿಸುತ್ತಾರೆ.

**1964:** ಅಮೆರಿಕದಲ್ಲಿ ಸಿವಿಲ್ ರೈಟ್ ಆ್ಯಕ್ಟ್ ಅಂಗೀಕಾರವಾಯಿತು. ಈ ಕಾಯಿದೆ ಜಾತಿ, ಬಣ್ಣ, ಧರ್ಮ ಅಥವಾ ಲಿಂಗದ ಆಧಾರದ ಮೇಲೆ ಭೇದ ಭಾವವನ್ನು ನಿಷೇಧಿಸಿತು.

**1976:** ಉತ್ತರ ವಿಯೆಟ್ನಾಂ ಮತ್ತು ದಕ್ಷಿಣ ವಿಯೆಟ್ನಾಂ ಒಂದಾಗಿ, ವಿಯೆಟ್ನಾಂ ಗಣರಾಜ್ಯ ರೂಪುಗೊಂಡಿತು.

### ಜನನ

**1908:** ಥರ್ಗುಡ್ ಮಾರ್ಶಲ್, ಅಮೆರಿಕದ ಸುಪ್ರೀಂ ಕೋರ್ಟ್‌ನ ಮೊದಲ ಆಫ್ರೋ-ಅಮೆರಿಕನ್ ನ್ಯಾಯಮೂರ್ತಿ.

**1923:** ಫ್ರಾಂಝ್ ಕ್ರಾಫ್ಟ್ ಎಬರ್‌ಹಾರ್ಡ್, ವಿಶಿಷ್ಟ ಜರ್ಮನ್ ಲೇಖಕ ಸಮಾಜಶಾಸ್ತ್ರದಲ್ಲಿ ಹೆಸರಾಂತ.

**1961:** ಪೋಷಣೆ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಹೆಸರಾದ ಆಸ್ಟ್ರೇಲಿಯಾದ ಬಾಲ ಇವಾನ್ ಹಾರಿಸ್.

### ಮರಣ

**1932:** ಮೇಕ್‌ಶಿಕೋ ದೇಶದ ರಾಜಕೀಯ ನಾಯಕ ಮತ್ತು ರಾಷ್ಟ್ರಪತಿಯಾಗಿದ್ದ ಪ್ಯಾಸ್ಕುಯಲ್ ಓರ್ಟಿಜ್ ರೂಬಿಯೊ.

**1997:** ಜಿಮಿ ಸ್ಟ್ಯೂವ್, ಅಮೆರಿಕದ ಚಲನಚಿತ್ರ ನಟ ಮತ್ತು ಆಸ್ಕರ್ ಪ್ರಶಸ್ತಿ ವಿಜೇತ.

# ಕೊಣನೂರು ಹೋಬಳಿ ರೈತ ಸಂಘ ಉದ್ಘಾಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಕಲಗೂಡು: ತಾಲ್ಲೂಕಿನ ಕೊಣನೂರು ಗ್ರಾಮದ ಅಂಬೇಡ್ಕರ್ ಭವನದಲ್ಲಿ ಕೊಣನೂರು ಹೋಬಳಿ ಮಟ್ಟದ ರೈತ ಸಂಘದ ಪದಾಧಿಕಾರಿಗಳ ಆಯ್ಕೆ ಮತ್ತು ಘಟಕದ ಉದ್ಘಾಟನೆ ಕಾರ್ಯಕ್ರಮ ಸೋಮವಾರ ನಡೆಯಿತು.

ಕಾರ್ಯಕ್ರಮ ಮೊದಲು ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ರೈತ ಸಂಘದ ಪದಾಧಿಕಾರಿಗಳು, ಮುಖಂಡರು, ರೈತರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ್ ಮಾತನಾಡಿ, ರೈತರ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಕುರಿತು ಮುಕ್ತವಾಗಿ ಚರ್ಚಿಸಬಹುದಾಗಿದೆ. ಯಾವುದೇ ಹಿಂಜರಿಕೆ ಇಟ್ಟುಕೊಳ್ಳದೇ ಸಂಘದ ಚಟುವಟಿಕೆಗಳಲ್ಲಿ ಭಾಗಿಯಾಗಿ ಪರಿಹಾರ ಕಂಡುಕೊಳ್ಳಬಹುದು ಮತ್ತು ಇತರೆ ರೈತರ ತೊಂದರೆಗಳನ್ನು ಸಹ ಆಲಿಸಿ ಬೆಂಬಲವಾಗಿ ನಿಲ್ಲಬಹುದಾಗಿದೆ. ರೈತರಿಗೆ ಅನ್ಯಾಯವಾದಾಗ ಅದರ ವಿರುದ್ಧ ಹೋರಾಟ ಮಾಡಲು ಹಿಂದೇಟು ಹಾಕದೆ ಸಂಘ ಕರೆ ನೀಡಿದ ವೇಳೆ ಸಕ್ರಿಯವಾಗಿ ಪಾಲ್ಗೊಳ್ಳಬೇಕಿದೆ ಎಂದು ಹೇಳಿದರು.

ಜಿಲ್ಲಾ ಉಪಾಧ್ಯಕ್ಷ ವಾಜಿದ್ ಮಾತನಾಡಿ, ಸರ್ಕಾರದಿಂದ ಸಿಗುವ ಅನುಕೂಲಗಳನ್ನು ಪಡೆದು ಆರ್ಥಿಕವಾಗಿ ಸದೃಢವಾಗಬೇಕು ಎಲ್ಲಾ ಇಲಾಖೆಯಲ್ಲಿ ಸಬ್ಸಿಡಿ ಇದ್ದು ರೈತರು ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.


ತಾಲ್ಲೂಕು ಅಧ್ಯಕ್ಷ ದಿನೇಶ್ ಮಾತನಾಡಿ, ರೈತ ಸಂಘದಲ್ಲಿ ಯಾವುದೇ ಜಾತಿ ಭೇದವಿಲ್ಲ ಹಸಿರು ಸಾಲು ಒಂದೇ ಜಾತಿಯಾಗಿದೆ. ಎಲ್ಲರೂ ರೈತ ಸಂಘ ಸೇರಿ ಹೋರಾಟ ನಡೆಸಲು ಸಿದ್ಧರಾಗಿ ಎಂದು ಮನವಿ ಮಾಡಿದರು.

ಜಿಲ್ಲಾ ಸಂಘಟನಾ ಕಾರ್ಯದರ್ಶಿ ಶ್ರೀನಿವಾಸ ಮಾತನಾಡಿದರು.

ತಾಲ್ಲೂಕು ಗೌರವಾಧ್ಯಕ್ಷ ರಾಮೇಗೌಡ, ಹೋಬಳಿ ಘಟಕದ ಅಧ್ಯಕ್ಷ ನವೀನ್, ಗೌರವ ಅಧ್ಯಕ್ಷ ವೆಂಕಟೇಶ್, ಮುಖಂಡರಾದ ಬಾನಗುಂದಿ ಮಂಜೇಗೌಡ, ಬೊಮ್ಮನಹಳ್ಳಿ ಶಿವಣ್ಣ ಇತರರಿದ್ದರು.

# ಪರಿಸರ ಮಿತ್ರ ಮಂಜಯ್ಯಗೆ ಆತ್ಮೀಯ ಬೀಳ್ಕೊಡುಗೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಕಲಗೂಡು: ತಾಲ್ಲೂಕಿನ ದೊಡ್ಡಮಗ್ಗೆ ಮಾದರಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪರಿಸ್ನೇಹಿ, ಜನಸ್ನೇಹಿಯಾಗಿ ಸುದೀರ್ಘ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ದೈಹಿಕ ಶಿಕ್ಷಕ ಮಂಜಯ್ಯ ಅವರನ್ನು ಪೋಷಕರು, ವಿದ್ಯಾರ್ಥಿಗಳು, ಶಿಕ್ಷಣ ಇಲಾಖೆ ಸಂಘಟನೆಗಳ ಮುಖಂಡರು ಆತ್ಮೀಯವಾಗಿ ಬೀಳ್ಕೊಟ್ಟರು.

ವಯೋನಿವೃತ್ತಿ ಹೊಂದಿದ ಮಂಜಯ್ಯ ಅವರು 1994ರಲ್ಲಿ ಕೊಡಗು ಜಿಲ್ಲೆ ವೀರಾಜಪೇಟೆ ಚನ್ನಯ್ಯಕೋಟೆ ಸರ್ಕಾರಿ ಶಾಲೆಯಲ್ಲಿ ಸೇವೆಗೆ ಸೇರಿದರು. 2025ರಲ್ಲಿ ತಾಲ್ಲೂಕಿನ ದೊಡ್ಡಮಗ್ಗೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ವರ್ಗಾವಣೆಗೊಂಡು ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣ, ವಿವಿಧ ಕ್ರೀಡೆಗಳಲ್ಲಿ ವಿದ್ಯಾರ್ಥಿಗಳು ಸಾಧನೆ ಮಾಡಲು ನೆರವಾಗುವ ನಿಟ್ಟಿನಲ್ಲಿ ವಿಶೇಷ ಆಸಕ್ತಿಯೊಂದಿಗೆ ತೊಡಗಿಕೊಂಡಿದ್ದರು. ಪ್ರಮುಖವಾಗಿ ಶಾಲಾ ಆವರಣದಲ್ಲಿ ಮಂಜಯ್ಯ ಅವರು ಸ್ವಯಂ ಪ್ರೇರಿತವಾಗಿ ಗಿಡಗಳನ್ನು ನೆಟ್ಟು ಪೋಷಣೆ ಮಾಡಿ ಮರಗಳನ್ನು ಬೆಳೆಸಿದ್ದಾರೆ. ಶಾಲಾ ಮುಂಭಾಗ ಕೈತೋಟ ಕೂಡ ನಿರ್ಮಿಸಿದ್ದಾರೆ. ಇದಲ್ಲದೇ ಪಕ್ಷಿಗಳು,ಬಾತುಕೋಳಿಗಳನ್ನು ಸಾಕಿದ್ದಾರೆ. ಅವರ ಪರಿಸರ ಕಾಳಜಿಯನ್ನು ಕಂಡು 2010ರಲ್ಲಿ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಮತ್ತು 2011ರಲ್ಲಿ ಪರಿಸರ ಮಿತ್ರ ಪ್ರಶಸ್ತಿ ಪಡೆದುಕೊಂಡು ತಾಲ್ಲೂಕಿಗೆ ಕೀರ್ತಿ ತಂದಿದ್ದಾರೆ.

ಕಳೆದ 10 ವರ್ಷಗಳಿಂದಲೂ ನಿರಂತರವಾಗಿ ಪೋಷಕರು, ವಿದ್ಯಾರ್ಥಿಗಳಿಗೆ ಶ್ರೀ ಕೃಷ್ಣ ಜನ್ಮಾಷ್ಟಮಿ ದಿನದಂದು ವಿಶೇಷ ಕಾರ್ಯಕ್ರಮ ಆಯೋಜನೆ ಮಾಡಿ ಮಕ್ಕಳಲ್ಲಿ ಧಾರ್ಮಿಕ ಮನೋಭಾವನೆಯನ್ನು ಸಹ ಜಾಗೃತಿಗೊಳಿಸಿದ್ದಾರೆ. ಈ ಹಿಂದೆ ಸಾಮಾನ್ಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಾಗಿದ್ದ ದೊಡ್ಡಮಗ್ಗೆ ಶಾಲೆ ಮಂಜಯ್ಯ ಅವರ ಅವಿರತ ಶ್ರಮದಿಂದ ಮಾದರಿ ಸರ್ಕಾರಿ ಶಾಲೆಯಾಗಿ ಮಾರ್ಪಟ್ಟಿದೆ. ಅದಕ್ಕೆ ಶಾಲೆಯ ಶಿಕ್ಷಕರು, ಶಾಲಾಭಿವೃದ್ಧಿ ಸದಸ್ಯರು, ಸ್ಥಳೀಯರು ಸಹಕಾರ ನೀಡಿದ್ದಾರೆ.

ಶಾಲೆಯ ಉತ್ತಮ ಪರಿಸರ, ಗುಣಮಟ್ಟದ ಶಿಕ್ಷಣ ಬೋಧನೆ ಹಿನ್ನೆಲೆ ಇಂದಿಗೂ ಕೂಡ ನೂರಕ್ಕೂ ಅಧಿಕ ಸಂಖ್ಯೆಯ ಮಕ್ಕಳು ಶಾಲೆಯಲ್ಲಿದ್ದಾರೆ.

ಈ ಸಂದರ್ಭದಲ್ಲಿ ಶಿಕ್ಷಕರ ಸಂಘಟನೆಯ ಪದಾಧಿಕಾರಿಗಳಾದ ರಾಜಶೇಖರಪ್ಪ, ಕುಮಾರ್ ಹನ್ಯಾಳು, ಮೋಹನ್‌ಕುಮಾರ್, ದೈಹಿಕ ಶಿಕ್ಷಣ ಪರಿವೀಕ್ಷಕ ನಿಂಗಯ್ಯ, ದೇವರಾಜ್, ಪ್ರಕಾಶ್, ಯೋಗರಾಜ್ ಪೋಷಕರು ಹಾಜರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248